## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸರ್ಕಾರಿ ನೌಕರರ ವರ್ಗಾವಣೆಗಳ ಬಗ್ಗೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 18 ಸೇನೌವ 2014, ಬೆಂಗಳೂರು,**
**ದಿನಾಂಕ: 06.02.2014**

ಸರ್ಕಾರಿ ನೌಕರರ ವರ್ಗಾವಣೆ/ನಿಯೋಜನೆಗಳನ್ನು ನಿಯಂತ್ರಿಸುವ ಬಗ್ಗೆ ದಿನಾಂಕ: 07.06.2013 ರ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013 ರಲ್ಲಿ ಮಾರ್ಗಸೂಚಿಗಳನ್ನು ನೀಡಲಾಗಿರುತ್ತದೆ. ಸದರಿ ಆದೇಶದ ಖಂಡಿಕೆ 9.ಅ.vii ಕ್ಕೆ ಈ ಕೆಳಕಂಡ ಅಂಶಗಳನ್ನು ಸೇರಿಸಿ ಆದೇಶಿಸಲಾಗಿದೆ.

'ಅಂಗವಿಕಲರನ್ನು ಸಹಾನುಭೂತಿಯಿಂದ ನೋಡಬೇಕು. ಅವರಿಗೆ ವರ್ಗಾವಣೆಯ ಸಾಮಾನ್ಯ ನಿಯಮಗಳಲ್ಲಿ ರಿಯಾಯಿತಿಯನ್ನು ನೀಡಬೇಕು. ಅಲ್ಲದೆ ಅವರ ಕಾರ್ಯನಿಷ್ಠೆಯ ಬಗ್ಗೆ ಯಾವುದೇ ಆಕ್ಷೇಪಣೆ ಇಲ್ಲದಿದ್ದಲ್ಲಿ ಒಂದೇ ಸ್ಥಳದಲ್ಲಿ ನಿಗದಿತ ಅವಧಿಗಿಂತ ಹೆಚ್ಚು ಕಾಲ ಮುಂದುವರೆಸಬಹುದಾಗಿದೆ. ಹಾಗು ಒಂದು ವೇಳೆ ವರ್ಗಾವಣೆ ಮಾಡಲೇ ಬೇಕಾದುದು ಅತ್ಯವಶ್ಯವಾದಲ್ಲಿ ಅಥವಾ ಅವರಿಗೆ ಬಡ್ತಿ ಕೊಟ್ಟಾಗ ವರ್ಗಾವಣೆ ಅತ್ಯವಶ್ಯವಾದಾಗ ಅಂಗವಿಕಲರನ್ನು ಅವರ ಇಚ್ಛೆಗೆ ವಿರುದ್ಧವಾಗಿ ವರ್ಗಾಯಿಸುವ ಪ್ರಕರಣಗಳು ಅತಿ ವಿರಳವಾಗಿರಬೇಕು. ಅಂಗವಿಕಲ ನೌಕರರು ಆದ್ಯತೆ ನೀಡಿದ ಸ್ಥಳಕ್ಕೇ ವರ್ಗಾವಣೆ ಮಾಡಬೇಕು.'

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಾ. ಮಂಗಳ. ಜೆ.ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಇವರಿಗೆ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸಿಆಸುಇ (ಸೇವಾ ನಿಯಮಗಳು-ಬಿ) ಶಾಖೆಗೆ ಕಳುಹಿಸಬೇಕೆಂದು ಕೋರಲಾಗಿದೆ.

**ಪ್ರತಿ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು.

Scanned with CamScanner